ಅಪರ ಸಿವಿಲ್ ನ್ಯಾಯಾಧೀಶರು ಜೆಎಂಎಫ್‌ಸಿ ನ್ಯಾಯಾಲಯ,
ಚನ್ನಪಟ್ಟಣ

**<u>CC No. 1302/2021</u>**

| | | |
|---|---|---|
| ಸಾಕ್ಷಿದಾರರ ಹೆಸರು | : | ಎಂ ಬೈರಲಿಂಗಯ್ಯ |
| ತಂದೆಯ ಹೆಸರು | : | ಲೇಟ್ ಮುನಿ ಬೈರಯ್ಯ |
| ವಯಸ್ಸು | : | 66 ವರ್ಷ |
| ಉದ್ಯೋಗ | : | ರೈತ |
| ವಾಸಸ್ಥಳ | : | ಚನ್ನಪಟ್ಟಣ |

ಸ್ಸಾಕ್ಷಿಯನ್ನು ಕರೆಯಿಸಲಾಯಿತು ಪ್ರಮಾಣ ವಚನ ಬೋಧಿಸಲಾಯಿತು.
ಮುಖ್ಯ ವಿಚಾರಣೆ ಎ.ಪಿ.ಪಿ ಯವರಿಂದ : ದಿಃ 23.01.2026

ಆರೋಪಿತರು ಹಾಗೂ ಚಾಸಾ 1 ರಿಂದ 3 ನನಗೆ ಗೊತ್ತಿಲ್ಲ. ಘಟನೆಯನ್ನು ಪ್ರತ್ಯಕ್ಷವಾಗಿ ನೋಡಿಲ್ಲ. ಘಟನೆಯ ಬಗ್ಗೆ ನನಗೆ ಏನೂ ಗೊತ್ತಿಲ್ಲ. ಘಟನೆಯ ಬಗ್ಗೆ ನಾನು ಪೋಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

**ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ತೀರ್ಮಾನಿಸಿ ಅಭಿಯೋಜಕರ ಕೋರಿಕೆಯ ಮೇರೆಗೆ ಪಾಟೀ ಸವಾಲುಗೆ ಅನುಮತಿಸಲಾಯಿತು. ಪಾಟೀ ಸವಾಲುಃ ಎ.ಪಿ.ಪಿ. ಯವರಿಂದಃ-**

ದಿ 05.07.2021 ರಂದು ಮದ್ಯಾಹ್ನ 1-00 ಗಂಟೆ ಸುಮಾರಿಗೆ ಆರೋಪಿತರು ದೃಷ್ಟಿ ಆಸ್ಪತ್ರೆ ಹತ್ತಿರ ಇರುವ ಚಾಸಾ-1ರವರ ಮನೆಯ ಮುಂದೆ ಬಂದು ಏಕಾ ಏಕಿ ಚಾಸಾ-1 ಮತ್ತು 2ರವರನ್ನು ಅವಾಚ್ಯ ಶಬ್ದಗಳಿಂದ ಬೈದು ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. 2ನೇ ಆರೋಪಿ ಚಾಸಾ-1ರವರ ಕಪಾಳಕ್ಕೆ ಹೊಡೆದು, 3ನೇ ಆರೋಪಿ ಚಾಸಾ-1ರವರಿಗೆ ಚಪ್ಪಲಿಯಿಂದ ಹೊಡೆದದ್ದನ್ನು ನಾನು ಪ್ರತ್ಯಕ್ಷವಾಗಿ ನೋಡಿದ್ದೇನೆ ಎಂದರೆ ಸರಿಯಲ್ಲ, ಆರೋಪಿತರನ್ನು ಮತ್ತು ಸಾಕ್ಷಿ ಚಾಸಾ-1 ಮತ್ತು 2ರವನ್ನು ಸಮಧಾನಪಡಿಸಿ ನಾನು

ಘಟನಾ ಸ್ಥಳದಿಂದ ಹೋಗಿರುತ್ತೇನೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿ ಕೇಳಿ ಕೊಂಡ ನಿಪಿ-4ರಂತೆ ಪೊಲೀಸರ ಮುಂದೆ ನಾನು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**ಪಾಟೀ ಸವಾಲು ಃ ಆರೋಪಿ ಪರ ಶ್ರೀ ವಕೀಲರಿಂದ**

ಪಾಟೀ ಸವಾಲು ಇಲ್ಲ ಆರೋಪಿ ಪರ ವಕೀಲರು ನುಡಿದಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಒ

ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ ಚನ್ನಪಟ್ಟಣ.